ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS** 11

ಇಲಾಖೆ / ವಿಷಯ : DEPARTMENT / SUBJECT: [illegible] ರಾಷ್ಟ್ರಪತಿಯವರು

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE 26/1/21

# ‘ಅಪಾಯ ಎದುರಿಸಲು ಸನ್ನದ್ಧ’

ಪ್ರ.ವಾ. 26-1-2021

ನವದೆಹಲಿ (ಪಿಟಿಐ): ‘ಭಾರತವು ಶಾಂತಿಗೆ ಬದ್ಧವಾಗಿದೆ. ಆದರೆ, ದೇಶದ ಭದ್ರತೆಗೆ ಎದುರಾಗುವ ಯಾವುದೇ ಅಪಾಯವನ್ನು ಎದುರಿಸಲು ನಮ್ಮ ಸೇನಾ ಪಡೆಗಳು ಸನ್ನದ್ಧವಾಗಿವೆ’ ಎಂದು ರಾಷ್ಟ್ರಪತಿ ರಾಮನಾಥ ಕೋವಿಂದ್ ಸೋಮವಾರ ಹೇಳಿದರು.



72ನೇ ಗಣರಾಜ್ಯೋತ್ಸವದ ಮುನ್ನಾದಿನದ ತಮ್ಮ ಭಾಷಣದಲ್ಲಿ, ಚೀನಾದ ವಿಸ್ತರಣಾವಾದಕ್ಕೆ ಉತ್ತರವೆಂಬಂತೆ ಮಾತನಾಡಿದ ಅವರು, ‘ಯಾವುದೇ ಬೆಲೆ ತೆತ್ತಾದರೂ ರಾಷ್ಟ್ರದ ಹಿತಾಸಕ್ತಿಯನ್ನು ಕಾಪಾಡಲಾಗುವುದು. ಕಳೆದ ವರ್ಷ ನಾವು ಗಡಿಯಲ್ಲಿ ವಿಸ್ತರಣಾ ವಾದದ ಸವಾಲನ್ನು ಎದುರಿಸಿದೆವು. ನಮ್ಮ ವೀರ ಯೋಧರು, ವಿರೋಧಿಗಳ ಉದ್ದೇಶವನ್ನು ವಿಫಲಗೊಳಿಸಿದರು. ಅವರಲ್ಲಿ 20 ಯೋಧರು ಹುತಾತ್ಮರಾದರು. ಈ ಯೋಧರ ತ್ಯಾಗಕ್ಕೆ ರಾಷ್ಟ್ರವು ಋಣಿಯಾಗಿರುತ್ತದೆ’ ಎಂದರು.

## ರಾಷ್ಟ್ರಪತಿ ರಾಮನಾಥ ಕೋವಿಂದ್ ಹೇಳಿದ್ದು

- ಸಂವಿಧಾನವು ಉಲ್ಲೇಖಿಸಿರುವ ಭ್ರಾತೃತ್ವದ ಭಾವವು ದೇಶದಲ್ಲಿ ಜೀವಂತವಾಗಿಲ್ಲದಿದ್ದರೆ ಕೋವಿಡ್ ಪಿಡುಗನ್ನು ಪರಿಣಾಮಕಾರಿಯಾಗಿ ಎದುರಿಸಲು ಸಾಧ್ಯವಾಗುತ್ತಿರಲಿಲ್ಲ
- ಕೋವಿಡ್ ಅಗ್ನಿಪರೀಕ್ಷೆಯನ್ನು ಎದುರಿಸುವಲ್ಲಿ ಭಾರತವು ನಿರಾಶೆಯನ್ನು ದೂರಮಾಡಿ ಆತ್ಮವಿಶ್ವಾಸದಿಂದ ನಿಂತಿದೆ
- ಪ್ರತಿಕೂಲ ಸ್ಥಿತಿಗಳು ಪಾಠಗಳನ್ನು ಕಲಿಸುವ ಮೂಲಕ ನಮ್ಮನ್ನು ಬಲಶಾಲಿಯಾಗಿಸಿ ಆತ್ಮವಿಶ್ವಾಸ ಮೂಡಿಸುತ್ತವೆ. ಇಂಥ ಪ್ರತಿಕೂಲಗಳನ್ನು ಎದುರಿಸಿ ಭಾರತ ಹಲವಾರು ಕ್ಷೇತ್ರಗಳಲ್ಲಿ ಪ್ರಗತಿ ಸಾಧಿಸಿದೆ

‘ಭಾರತ-ಚೀನಾ ಗಡಿಯಲ್ಲಿ ಒಂಬತ್ತು ತಿಂಗಳುಗಳಿಂದ ಉದ್ವಿಗ್ನತೆ ಇದೆ. ಮೈನಸ್ 50ರಿಂದ 60ಡಿಗ್ರಿ ಸೆಲ್ಸಿಯಸ್ ತಾಪಮಾನದ ಗಾಲ್ವನ್ ಕಣಿವೆಯಿಂದ, ಜೈಸಲ್ಮೇರ್‌ನ 50ಡಿಗ್ರಿ ಸೆಲ್ಸಿಯಸ್‌ನ ಸುಡುಬಿಸಿಲಿನ ಪ್ರದೇಶದವರೆಗೆ, ಭೂಮಿ, ಆಕಾಶ ಹಾಗೂ ವಿಸ್ತಾರವಾದ ಕರಾವಳಿಯುದ್ದಕ್ಕೂ ನಮ್ಮ ಸೈನಿಕರು ಎಚ್ಚರದಿಂದಿದ್ದಾರೆ. ಅವರ ತ್ಯಾಗ, ದೇಶಭಕ್ತಿಯ ಬಗ್ಗೆ ಪ್ರತಿ ಭಾರತೀಯನಿಗೂ ಹೆಮ್ಮೆ ಇದೆ’ ಎಂದರು.

ಕೃಷಿ ಕಾಯ್ದೆಗಳ ರದ್ದತಿಗೆ ಒತ್ತಾಯಿಸಿ ನಡೆಯುತ್ತಿರುವ ರೈತರ ಪ್ರತಿಭಟನೆಯನ್ನು ಉಲ್ಲೇಖಿಸಿ, ‘ಮೂರು ಕೃಷಿ ಕಾಯ್ದೆಗಳ ಬಗ್ಗೆ ರೈತರು ಭಯಪಡುವ ಅಗತ್ಯವಿಲ್ಲ. ಸುಧಾರಣೆಯ ಹಾದಿಯಲ್ಲಿ ಆರಂಭದಲ್ಲಿ ಕೆಲವು ತಪ್ಪುಗ್ರಹಿಕೆಗಳು ಹುಟ್ಟಿಕೊಂಡಿರಬಹುದು. ಆದರೆ ಸರ್ಕಾರವು ರೈತರ ಅಭಿವೃದ್ಧಿಗೆ ಬದ್ಧವಾಗಿದೆ’ ಎಂದರು.